





ಗೌರವಾನ್ವಿತ ಸಭಾಪತಿಗಳಾದ ಶ್ರೀ ಬಸವರಾಜ ಹೊರಟ್ಟಿ ಅವರ ಶಾಸಕರ ಪ್ರದೇಶ ಅಭಿವೃದ್ಧಿ ಅನುದಾನದ ಅಡಿಯಲ್ಲಿ ವಿಕಲಚೇತನರಿಗೆ ತ್ರಿಚಕ್ರ ವಾಹನವನ್ನು ಬಸವರಾಜ್ ಹೊರಟ್ಟಿ ದಂಪತಿಗಳು ಇಂದು ಹುಬ್ಬಳ್ಳಿಯಲ್ಲಿ ವಾಹನ ಕೀಲಿ ನೀಡುವ ಮೂಲಕ ಹಸ್ತಾಂತರಿಸಿದರು.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ಮಾತನಾಡಿ ತ್ರಿಚಕ್ರ ವಾಹನವನ್ನು ಸದುಪಯೋಗ ಮಾಡಿಕೊಂಡು ಸ್ವಾವಲಂಬಿಗಳಾಗಿ ಸ್ವಾಭಿಮಾನದಿಂದ ಬದುಕಿರಿ ಎಂದು ಹೇಳಿದರು. ನಿಮ್ಮೊಂದಿಗೆ ಸದಾ ನಾನು ಇರುತ್ತೇನೆ ಯಾವುದಕ್ಕೂ ಚಿಂತಿಸುವ ಅವಶ್ಯಕತೆ ಇಲ್ಲ ಎಂದು ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಫಲಾನುಭವಿಗಳಾದ ಎಲ್ಲ ವಿಕಲಚೇತನರು ಬಸವರಾಜ ಹೊರಟ್ಟಿ ದಂಪತಿಗಳನ್ನು ಗೌರವಿಸಿ ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಿಕಲಚೇತನ ಇಲಾಖೆಯ ಅಧಿಕಾರಿಗಳು ಇನ್ನಿತರರು ಉಪಸ್ಥಿತರಿದ್ದರು.